# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2023-24ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ ಶೈಕ್ಷಣಿಕ ವೇಳಾಪಟ್ಟಿಯ ಕುರಿತು.

ಉಲ್ಲೇಖ:
1) ಸರ್ಕಾರದ ಆದೇಶ ಸಂಖ್ಯೆ: ಇಡಿ 80 ಯುಎನ್‌ಇ 2023, ದಿನಾಂಕ: 22.05.2023.
2) ಆಡಳಿತಾಧಿಕಾರಿಗಳು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಇವರ ಪತ್ರ ಸಂಖ್ಯೆ: ಕರಾಉಶಿಪ/56/BCU Assn-ಮನವಿ/ 2023/24/493, ದಿನಾಂಕ: 14.07.2023.

ಪ್ರಸ್ತಾವನೆ:-

ಮೇಲೆ ಓದಲಾದ (1)ರ ಆದೇಶದಲ್ಲಿ 2023-24ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಗೆ ಸಂಬಂಧಿಸಿದಂತೆ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಯಗಳು /ಕಾಲೇಜು ಶಿಕ್ಷಣ/ಅನುದಾನ/ ಅನುದಾನ ರಹಿತ ಕಾಲೇಜುಗಳಲ್ಲಿ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) ಶೈಕ್ಷಣಿಕ ವೇಳಾಪಟ್ಟಿಯನ್ನು ಜಾರಿಗೊಳಿಸುವಂತೆ ಆದೇಶಿಸಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ, ದಿನಾಂಕ: 22.05.2023ರ ಆದೇಶದಲ್ಲಿ Commencement of I Semester Classes ಗಳನ್ನು ಪ್ರಾರಂಭಿಸಲು ದಿನಾಂಕ: 17.07.2023 ಅನ್ನು ನಿಗದಿಪಡಿಸಲಾಗಿರುತ್ತದೆ. ಆದರೆ, 6,8 ಮತ್ತು 10ನೇ ಸೆಮಿಸ್ಟರ್ ಗಳು ದಿನಾಂಕ: 24.07.2023ರವರೆಗೆ ತರಗತಿಗಳು ನಡೆಯಲಿದ್ದು, 2 &4 ನೇ ಸೆಮಿಸ್ಟರ್‌ಗಳ ತರಗತಿಗಳು ದಿನಾಂಕ: 14.08.2023ರವರೆಗೆಗೂ (2022-23ನೇ ಸಾಲಿನ) ನಡೆಯಲಿವೆ. ಹೀಗಾಗಿ 2023-24ನೇ ಸಾಲಿನ 1ನೇ ಸೆಮಿಸ್ಟರ್ ನ್ನು ದಿನಾಂಕ: 17.07.2023 ರಂದು ಪ್ರಾರಂಭಿಸಲು ಕೊಠಡಿ ಹಾಗೂ ಇತರೆ ವ್ಯವಸ್ಥೆಗಳಿಗೆ ಅನಾನುಕೂಲವಾಗುವ ಸಂದರ್ಭಗಳಿರುತ್ತವೆ ಎಂದು Bengaluru City University Principals' Association ರವರು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿಗೆ ಮನವಿ ಸಲ್ಲಿಸಿದ್ದು, ಸದರಿ ಮನವಿಯನ್ನು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ಪುರಸ್ಕರಿಸಿ, ಈ ಕುರಿತು ಸೂಕ್ತ ಆದೇಶವನ್ನು ಹೊರಡಿಸಲು ಕೋರಿರುತ್ತಾರೆ.

ಆಡಳಿತಾಧಿಕಾರಿಗಳು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಇವರು ದಿನಾಂಕ: 14.07.2023ರಂದು ನೀಡಿರುವ ವರದಿಯನುಸಾರ 2023-24ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಗೆ ಸಂಬಂಧಿಸಿದಂತೆ Commencement of I Semester Classes ಗಳನ್ನು ಪ್ರಾರಂಭಿಸಲು ನಿಗದಿಪಡಿಸಿರುವ ದಿನಾಂಕವನ್ನು ವಿಸ್ತರಿಸಲು ತೀರ್ಮಾನಿಸಿ, ಅದರಂತೆ ಈ ಕೆಳಕಂಡ ಆದೇಶ.

## ಸರ್ಕಾರಿ ಆದೇಶ ಸಂ. ಇಡಿ 80 ಯುಎನ್‌ಇ 2023, ಬೆಂಗಳೂರು, ದಿನಾಂಕ:17.07.2023.

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2023-24ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಗೆ ಸಂಬಂಧಿಸಿದಂತೆ ಶೈಕ್ಷಣಿಕ ವೇಳಾಪಟ್ಟಿಯ ಕೋಷ್ಟಕದಲ್ಲಿನ ಕ್ರಮಸಂಖ್ಯೆ: 04ರಲ್ಲಿನ Commencement of I Semester Classes ಗಳನ್ನು ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಯಗಳು /ಕಾಲೇಜು ಶಿಕ್ಷಣ/

...2

ಅನುದಾನ/ ಅನುದಾನ ರಹಿತ ಕಾಲೇಜುಗಳಲ್ಲಿ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) ಪ್ರಾರಂಭಿಸಲು ನಿಗದಿಯಾಗಿರುವ ದಿನಾಂಕ: 17.07.2023ನ್ನು ದಿನಾಂಕ: 27.07.2023ಕ್ಕೆ ಮರು ನಿಗದಿಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1).

**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/112/ಯುಯುಸಿಎಂಎಸ್/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560 001.
ದಿನಾಂಕ: 20.07.2023

**ಪರಿಚಲನಾ ಆದೇಶ**

2023-24 ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಗೆ ಸಂಬಂಧಿಸಿದಂತೆ ಶೈಕ್ಷಣಿಕ ವೇಳಾಪಟ್ಟಿಯನ್ನು ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಯಗಳು / ಕಾಲೇಜು ಶಿಕ್ಷಣ / ಅನುದಾನ / ಅನುದಾನ ರಹಿತ ಕಾಲೇಜುಗಳಲ್ಲಿ ಪ್ರಾರಂಭಿಸಲು ನಿಗದಿಯಾಗಿರುವ ದಿನಾಂಕ:17.07.2023ನ್ನು ದಿನಾಂಕ:27.07.2023ಕ್ಕೆ ಮರುನಿಗದಿಪಡಿಸಿ ಆದೇಶಿಸಲಾಗಿರುವ ಸರ್ಕಾರದ ಆದೇಶ ಸಂಖ್ಯೆ:ಇಡಿ 80 ಯುಎನ್ಇ 2023 ಬೆಂಗಳೂರು ದಿನಾಂಕ:17.07.2023ನ್ನು ಈ ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ರವಾನಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ನೋಡಲ್ ಅಧಿಕಾರಿಗಳು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
3. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು ಧಾರವಾಡ ಮತ್ತು ಕಲಬುರಗಿ.
4. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
5. ಕಛೇರಿ ಪ್ರತಿ.